ಅ) ಇವುಗಳಲ್ಲಿ ಈವರೆವಿಗೆ ಉದ್ಘಾಟಿಸಲ್ಪಟ್ಟಿರುವ ಕಟ್ಟಡಗಳೆಷ್ಟು?

ಇ) ಈ ಯೋಜನೆಗಳನ್ನು ಅನುಷ್ಠಾನಕ್ಕೆ ತರಲು ಆಗಿರುವ ವಿಳಂಬಕ್ಕೆ ಕಾರಣಗಳೇನು? ಈ ಬಗ್ಗೆ ಸರ್ಕಾರವು ತೆಗೆದುಕೊಂಡ ಕ್ರಮಗಳೇನು?

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು) :

ಅ) 224 ಪ್ರೌಢಶಾಲೆಗಳು.

ಆ) ಬಹುತೇಕ ಪ್ರೌಢಶಾಲಾ ಕಟ್ಟಡಗಳ ನಿರ್ಮಾಣ ಅಂತಿಮ ಹಂತದಲ್ಲಿದೆ.

ಇ) 1997-98ನೇ ಸಾಲಿನಿಂದ 99-2000ನೇ ಸಾಲಿನವರೆಗೆ ಪ್ರತಿ ಪ್ರೌಢಶಾಲೆಗಳಿಗೆ ರೂ. 9.00 ಲಕ್ಷಗಳನ್ನು (ಪ್ರತಿ ವರ್ಷ ರೂ. 3.00 ಲಕ್ಷದಂತೆ) ಬಿಡುಗಡೆ ಮಾಡಿರುವುದರಿಂದ, ವಿಳಂಬದ ಪ್ರಶ್ನೆ ಉದ್ಭವಿಸುವುದಿಲ್ಲ.

ಚಿಕ್ಕನಾಯಕನಹಳ್ಳಿ ಕ್ಷೇತ್ರದಲ್ಲಿ ಪ್ರಾಥಮಿಕ ಆರೋಗ್ಯ ಘಟಕಗಳ ಸ್ಥಾಪನೆ

1047 - ಶ್ರೀ ಸುರೇಶ್ ಬಾಬು ಸಿ.ಬಿ. (ಚಿಕ್ಕನಾಯಕನಹಳ್ಳಿ ಕ್ಷೇತ್ರ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಕ್ಕನಾಯಕನಹಳ್ಳಿ ವಿಧಾನಸಭಾ ಕ್ಷೇತ್ರದಲ್ಲಿನ ಬರಶಿಡ್ಲಹಳ್ಳಿ ಮತ್ತು ಕಮಲಾಪುರ ಗ್ರಾಮಗಳಲ್ಲಿ ಪ್ರಾಥಮಿಕ ಆರೋಗ್ಯ ಘಟಕಗಳನ್ನು ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆಯೇ?

ಆ) ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರ ತೆಗೆದುಕೊಳ್ಳಲಿರುವ ಕ್ರಮಗಳೇನು?

ಡಾ॥ ಎ.ಬಿ. ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಬೆಂಗಳೂರಿನ ಕುರುಬರಹಳ್ಳಿಯಲ್ಲಿನ ಅರುಂಧತಿ ಕಾಲೇಜು ಆಫ್ ಫಾರ್ಮಸಿ

1048 - ಶ್ರೀ ಸುರೇಶ್ ಕುಮಾರು ಎಸ್. (ರಾಜಾಜಿನಗರ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ನಗರದಲ್ಲಿ ಕುರುಬರಹಳ್ಳಿಯಲ್ಲಿ (ಜೆ.ಸಿ. ನಗರ) ಅರುಂಧತಿ ಕಾಲೇಜ್ ಆಫ್ ಫಾರ್ಮಸಿ ಎಂಬ ಒಂದು ಕಾಲೇಜು 1994ರಲ್ಲಿ ಅಸ್ತಿತ್ವದಲ್ಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಈಗ ಆ ಕಾಲೇಜು ನಡೆಯುತ್ತಿದೆಯೇ?